Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
# ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)
## ವಾರ್ಡ್ ಸಮಿತಿ ಸಭೆ, ದಿನಾಂಕ:23-02-2021 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/11/20-21

ದಿನಾಂಕ: 23-02-2021 ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri.Madhu | Junior Health Inspector |
| 3. | Sri.Nagaraj | Work Inspector Ward No.47 |
| 4. | Sri. Kumar | Street Lights (Incharge) |
| 5. | Sri.Akram Nawaz | BWSSB |
| 6. | Sri. Suresh | Ward Committee Member |
| 7. | Sri. Ahemed Husian | Ward Committee Member |
| 8. | Sri. Manimaran | Ward Committee Member |
| 9. | Sri. Chand pasha | Ward Committee Member |
| 10. | Sri. Syed Ansar Pasha | Ward Committee Member |
| 11. | Sri.Rajan | Mother Foundation of India |

ಶ್ರೀ, ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

- ದಿನಾಂಕ : 23-02-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ಮೋದಿ ಗಾರ್ಡನ್, 6ನೇ ಅಡ್ಡರಸ್ತೆ, ಬಂಗಾರಗಿರಿ ನಗರ ಹಾಗೂ ಮೋದಿ ಗಾರ್ಡನ್ ಸ್ಲಮ್ ಬಳಿ ಕೆಲವು ಸಾರ್ವಜನಿಕರು ತಮ್ಮ ಶೌಚಾಲಯಗಳಿಂದ ಪೈಪ್‌ಲೈನ್ ಸಂಪರ್ಕವನ್ನು ಯುಜಿಡಿ ಗೆ ನೀಡದೇ ನೇರವಾಗಿ ಮಳೆನೀರು ಗಾಲುವೆಗೆ ಸಂಪರ್ಕ ಕಲ್ಪಿಸಿರುವುದಾಗಿ ಸಾರ್ವಜನಿಕರು ತಿಳಿಸಿದ್ದು, ಇದರಿಂದ ಮಳೆನೀರು ಗಾಲುವೆಯಲ್ಲಿ ಹೆಚ್ಚಿನ ಪ್ರಮಾಣದ ಹೂಳು ತುಂಬಿ ಮಳೆಗಾಲದಲ್ಲಿ ನೀರು ಕಾಲುವೆಯಿಂದ ಹೊರಬಂದು ರಸ್ತೆಯ ಮೇಲೆ ಹರಿಯುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ತಿಳಿಸಿರುತ್ತಾರೆ. ಆದ್ದರಿಂದ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸ್ಥಳ ಪರಿಶೀಲಿಸಿ ಸಂಬಂಧಪಟ್ಟ ಸಾರ್ವಜನಿಕರಿಗೆ ಸೂಚನೆ ನೀಡುವಂತೆ ಹಾಗೂ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.
2. ವಾರ್ಡ್ ನಂ.47 ರ ವ್ಯಾಪ್ತಿಯಲ್ಲಿ ಹೆಚ್ಚುವರಿ ಮಾರ್ಷಲ್‌ಗಳನ್ನು ನಿಯೋಜಿಸಲು ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ವಿಲೇವಾರಿ ವಿಭಾಗ) ರವರಿಗೆ ಈ ಹಿಂದಿನ ಸಭೆಗಳಲ್ಲಿ ಸೂಚಿಲಾಗಿತ್ತು. ಆದರೆ ಈ ವರೆವಿಗೆ ಹೆಚ್ಚುವರಿ ಮಾರ್ಷಲ್‌ಗಳನ್ನು ನಿಯೋಜಿಸಲಾಗಿಲ್ಲ ಎಂದು ತಿಳಿದು ಬಂದಿದ್ದು, ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಸ.ಕಾ.ಇಂ (ಘ.ತ್ಯಾ.ವಿ) ರವರಿಗೆ ಮತ್ತೊಮ್ಮೆ ಸೂಚಿಸಲಾಯಿತು.

Gill nodal – 45
Tbc att – 100

3. ವಾರ್ಡ್ ವ್ಯಾಪ್ತಿಯಲ್ಲಿ ಎನ್.ಪಿ ಪ್ಯಾಕ್ಟರಿ ರಸ್ತೆಯಲ್ಲಿ ಕೆಟ್ಟು ಹೋಗಿರುವ ಬೀದಿ ದೀಪಗಳನ್ನು ದುರಸ್ಥಿ ಪಡಿಸಲು ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ಉಸ್ತುವಾರಿ ಶ್ರೀ.ಕುಮಾರ್ ರವರಿಗೆ ಮುಂದಿನ 2 ದಿನಗಳಲ್ಲಿ ದುರಸ್ಥಿ ಪಡಿಸುವಂತೆ ಸೂಚಿಸಲಾಯಿತು.
4. ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕಾವಲ್‌ಭೈರಸಂದ್ರ ಬಸ್ ನಿಲ್ದಾಣದ ಮುಂಭಾಗದಲ್ಲಿ ಕೆಲವರು ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿದ್ದು, ಇದರಿಂದ ಸಾರ್ವಜನಿಕರಿಗೆ ಸಂಚರಿಸಲು ಕಷ್ಟಸಾಧ್ಯವಾಗುತ್ತಿರುವುದಾಗಿ ವಾರ್ಡ್ ಕಮಿಟಿ ಸದಸ್ಯರು ತಿಳಿಸಿರುತ್ತಾರೆ. ಅದರಂತೆ ಮುಂದಿನ ದಿನಗಳಲ್ಲಿ ದಿನಾಂಕ ಗೊತ್ತುಪಡಿಸಿ ಸ.ಕಾ.ಇಂ (ಘ.ತ್ಯಾ.ವಿ), ಸ.ಕಾ.ಇಂ (ಕಾಮಗಾರಿ ವಿಭಾಗ) ರವರು ಪೋಲೀಸ್ ಸಹಯೋಗದೊಂದಿಗೆ ರಸ್ತೆ ಒತ್ತುವರಿಯನ್ನು ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.
5. ಮುಂದಿನ ವಾರ್ಡ್ ಕಮಿಟಿ ಸಭೆಯಲ್ಲಿ ಪೋಲೀಸ್ ಇಲಾಖೆಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಿರುವಂತೆ ಸಂಬಂದಪಟ್ಟವರಿಗೆ ತಿಳಿಸಲು ಸೂಚಿಸಲಾಯಿತು.
6. ಒಂಟಿ ಮನೆಗಳ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ಸಭೆಯಲ್ಲಿ ಹಾಜರಿದ್ದ ಡಾ|| ಬಿ.ಆರ್ ಅಂಬೇಡ್ಕರ್ ದಲಿತ ಸಂರ್ಘಷ ಸಮಿತಿ ಪದಾಧಿಕಾರಿಗಳು ಈಗಾಗಲೇ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಾಮಾಜಿಕ ನ್ಯಾಯ ಸಮಿತಿಯ ಅಧ್ಯಕ್ಷರಿಗೆ ಪತ್ರ ಮುಖೇನಾ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಆರ್ಥಿಕವಾಗಿ ದುರ್ಬಲ ವರ್ಗದವರು, ಪೌರಕಾರ್ಮಿಕರು ಹಾಗೂ ಸಫಾಯಿ ಕರ್ಮಚಾರಿ ವರ್ಗದವರು ಹೆಚ್ಚಾಗಿ ವಾಸಿಸುತ್ತಿದ್ದು ಈ ವರ್ಗದ ಜನರಿಗೆ ಒಂಟಿ ಮನೆಗಳ ನಿರ್ಮಿಸುವ ಬಗ್ಗೆ ಅಗತ್ಯ ಕ್ರಮಕ್ಕಾಗಿ ಕೋರಿಕೆ ಸಲ್ಲಿಸಿರುತ್ತಾರೆ. ಅದರಂತೆ ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರು ಈಗಾಗಲೇ ಮೇಲ್ಕಂಡ ವರ್ಗದವರ ಅರ್ಹ ಫಲಾನುಭವಿಗಳನ್ನು ಪರಿಶೀಲಿಸಿ ಅರ್ಹತೆಯ ಮೇರೆಗೆ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಲು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರಿಗೆ ಈಗಾಗಲೇ ಸೂಚಿಸಿರುತ್ತಾರೆ. ಅದ್ದರಿಂದ ಒಂಟಿ ಮನೆಗಳಿಗೆ ಸಂಬಂಧಪಟ್ಟಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಲ್ಲಿಕೆಯಾಗಿರುವ ಅರ್ಹ ಫಲಾನುಭವಿಗಳನ್ನು ಕಂದಾಯ ಇಲಾಖೆಯ ಮೂಲಕ ಪರಿಶೀಲಿಸಿ ಶೀರ್ಘ ಅಗತ್ಯ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು ಸೂಚಿಸಲಾಯಿತು.

ಸಹಿ
(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10 ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47